**Akashvani : Bangalore**
**National Bulletin In Kannada**
**29.03.2025 / 19.35 hrs**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**29.03.2025 / 19.35 hrs**

**<><*<><>*><>**

ಮುಖ್ಯಾಂಶಗಳು

**೧. ಭೂಕಂಪ ಪೀಡಿತ ಮ್ಯಾನ್ಮಾರ್‌ಗೆ ಭಾರತ ಸಹಾಯಹಸ್ತ; ’ಆಪರೇಷನ್ ಬ್ರಹ್ಮ’ ಆರಂಭ**

**೨. ಮನ್ ಕಿ ಬಾತ್; ದೇಶವಾಸಿಗಳನ್ನುದ್ದೇಶಿಸಿ ನಾಳೆ ಪ್ರಧಾನಿ ನರೇಂದ್ರ ಮೋದಿ ಮನದಾಳದ ಮಾತು**

**೩. ಛತ್ತೀಸ್‌ಗಢದಲ್ಲಿ ಭದ್ರತಾಪಡೆಗಳ ಕಾರ್ಯಚರಣೆ; ೧೬ ಮಾವೋವಾದಿಗಳು ಹತ**

**೪. ಐಪಿಎಲ್ ಟಿ-೨೦ ಕ್ರಿಕೆಟ್; ಗುಜರಾತ್ ಟೈಟಾನ್ಸ್ ವಿರುದ್ಧ ಟಾಸ್ ಗೆದ್ದ ಮುಂಬೈ ಇಂಡಿಯನ್ಸ್ ಫೀಲ್ಡಿಂಗ್ ಆಯ್ಕೆ**

**<><*<><>*><>**

ಭೂಕಂಪ ಪೀಡಿತ ಮ್ಯಾನ್ಮಾರ್‌ಗೆ ಸಹಾಯ ಮಾಡಲು ಭಾರತ ಇಂದು ಆಪರೇಷನ್ ಬ್ರಹ್ಮ ಪ್ರಾರಂಭಿಸಿದೆ. ಈ ಕುರಿತು ನವದೆಹಲಿಯಲ್ಲಿಂದು ಮಾಹಿತಿ ನೀಡಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ೧೫ ಟನ್ ಪರಿಹಾರ ಸಾಮಗ್ರಿಗಳನ್ನು ಹೊತ್ತ ಮೊದಲ ವಿಮಾನವು ಇಂದು ಬೆಳಗಿನ ಜಾವ ೩ ಗಂಟೆಗೆ ಹಿಂಡನ್ ವಾಯು ನೆಲೆಯಿಂದ ಹೊರಟು, ಬೆಳಗ್ಗೆ ೮ ಗಂಟೆಗೆ ಯಾಂಗೋನ್ ತಲುಪಿದೆ ಎಂದು ತಿಳಿಸಿದ್ದಾರೆ. ಮ್ಯಾನ್ಮಾರ್‌ನಲ್ಲಿ ಸುಮಾರು ೫೦ ರಿಂದ ೬೦ ಸಾವಿರ ಭಾರತೀಯ ಮೂಲದವರಿದ್ದು, ಅವರಲ್ಲಿ ಇಲ್ಲಿವರೆಗೆ ಯಾವುದೇ ಸಾವು-ನೋವುಗಳು ವರದಿಯಾಗಿಲ್ಲ. ಭಾರತೀಯ ರಾಯಭಾರಿ ಕಚೇರಿಯು ಅಲ್ಲಿನ ಭಾರತೀಯ ಸಮುದಾಯದೊಂದಿಗೆ ಸಂಪರ್ಕದಲ್ಲಿದೆ ಎಂದು ಮಾಹಿತಿ ನೀಡಿದ್ದಾರೆ. ೮೦ ಸದಸ್ಯರನ್ನು ಒಳಗೊಂಡ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ- ಎನ್‌ಡಿಆರ್‌ಎಫ್ ನ ಶೋಧ ಮತ್ತು ರಕ್ಷಣಾ ತಂಡವು ಪರಿಹಾರ ಸಾಮಗ್ರಿಗಳೊಂದಿಗೆ ಇಂದು ಸಂಜೆ ನೇ ಪೈ ಟಾವ್ ತಲುಪಿದೆ ಎಂದು ರಣಧೀರ್ ಜೈಸ್ವಾಲ್ ತಿಳಿಸಿದ್ದಾರೆ.

**ಧ್ವನಿ: ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ (೩೩ ಸೆಕೆಂಡ್ಸ್ )**

**<><*<><>*><>**

ಮ್ಯಾನ್ಮಾರ್‌ನಲ್ಲಿ ಭೀಕರ ಭೂಕಂಪದ ಹಿನ್ನೆಲೆಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಮ್ಯಾನ್ಮಾರ್‌ನ ಹಿರಿಯ ಜನರಲ್ ಮಿನ್ ಅಂಗ್ ಹ್ಲೈಂಗ್ ಅವರೊಂದಿಗೆ ದೂರವಾಣಿ ಮೂಲಕ ಮಾತನಾಡಿದರು. ವಿಪತ್ತಿನಲ್ಲಿ ಸಂಭವಿಸಿದ ಜೀವಹಾನಿಗೆ ಪ್ರಧಾನಿ ನರೇಂದ್ರ ಮೋದಿ ಸಂತಾಪ ಸೂಚಿಸಿದ್ದಾರೆ. ಸಾಮಾಜಿಕ ಜಾಲತಾಣದ ಪೋಸ್ಟ್‌ನಲ್ಲಿ ಅವರು, ನೆರೆ ರಾಷ್ಟ್ರವಾಗಿರುವ ಭಾರತವು, ಈ ಕಷ್ಟದ ಸಮಯದಲ್ಲಿ ಮ್ಯಾನ್ಮಾರ್ ಜನರೊಂದಿಗೆ

ನಿಲ್ಲುತ್ತದೆ. 'ಆಪರೇಷನ್ ಬ್ರಹ್ಮ'ದ ಭಾಗವಾಗಿ ವಿಪತ್ತು ಪರಿಹಾರ ಸಾಮಗ್ರಿಗಳು, ಮಾನವೀಯ ನೆರವು, ಶೋಧ ಮತ್ತು ರಕ್ಷಣಾ ತಂಡಗಳನ್ನು ಪೀಡಿತ ಪ್ರದೇಶಗಳಿಗೆ ತ್ವರಿತವಾಗಿ ರವಾನಿಸಲಾಗುತ್ತಿದೆ ಎಂದು ಪ್ರಧಾನಿ ತಿಳಿಸಿದ್ದಾರೆ.

<><*<><>*><>

ಪರಿಸರದ ಬಗ್ಗೆ ಜಾಗೃತ ಮತ್ತು ಸೂಕ್ಷ್ಮತೆಯಿಂದ ಕೂಡಿದ ಜೀವನ ಶೈಲಿಯನ್ನು ಅಳವಡಿಸಿಕೊಳ್ಳುವುದರ ಮಹತ್ವದ ಬಗ್ಗೆ ರಾಷ್ಟ್ರಪತಿ ದ್ರೌಪದಿ ಮುರ್ಮು  ಒತ್ತಿ ಹೇಳಿದ್ದಾರೆ. ನವದೆಹಲಿಯ ವಿಜ್ಞಾನಭವನದಲ್ಲಿಂದು ರಾಷ್ಟ್ರೀಯ ಪರಿಸರ ಸಮ್ಮೇಳನ - ೨೦೨೫ ಅನ್ನು ಉದ್ಘಾಟಿಸಿ ಮಾತನಾಡಿದ ಅವರು, ಪರಿಸರ ಸಂರಕ್ಷಣೆಗೆ ಸಾಮೂಹಿಕ ಪ್ರಯತ್ನಗಳು ಅತ್ಯಂತ ಅಗತ್ಯವಾಗಿದೆ. ಪರಿಸರ ಸಂರಕ್ಷಣೆ ಸಂಬಂಧಿತ ಪ್ರಯತ್ನಗಳಲ್ಲಿ ಜನರ ಪಾಲ್ಗೊಳ್ಳುವಿಕೆಯನ್ನು ಪ್ರೋತ್ಸಾಹಿಸಬೇಕು ಎಂದು ಕರೆ ನೀಡಿದರು.  ಮರ, ಗಿಡ, ನದಿ ಜಲ ಸೇರಿದಂತೆ ಪ್ರಕೃತಿಯನ್ನು ಪೂಜಿಸುವ ಮಹಾನ್ ಸಂಸ್ಕೃತಿಯನ್ನು ಭಾರತೀಯರು ಪ್ರಾಚೀನ ಕಾಲದಿಂದಲೂ ಹೊಂದಿದ್ದು, ಪರಿಸರ ಸಂರಕ್ಷಣೆಗೆ ಇಡೀ ಜಗತ್ತು ಇದರಿಂದ ಪ್ರೇರಣೆ ಪಡೆಯಬಹುದಾಗಿದೆ ಎಂದು ನುಡಿದರು.  ೨೦೪೭ರ ವೇಳೆಗೆ ಭಾರತ ವಿಕಸಿತ ರಾಷ್ಟ್ರವನ್ನಾಗಿಸಬೇಕೆಂಬ ಪ್ರಯತ್ನಗಳು ನಡೆಯುತ್ತಿದ್ದು, ಈ ಹಿನ್ನೆಲೆಯಲ್ಲಿ ಪರಿಸರವನ್ನು ಸಂರಕ್ಷಿಸಿ ಆಧುನೀಕರಣಗೊಳ್ಳಬೇಕಿದೆ ಎಂದರು.  ಎರಡು ದಿನಗಳ ಕಾಲ ನಡೆಯಲಿರುವ ಈ ಸಮ್ಮೇಳನವನ್ನು ರಾಷ್ಟ್ರೀಯ ಹಸಿರು ನ್ಯಾಯ ಮಂಡಳಿ ಆಯೋಜಿಸಿದೆ. ಪರಿಸರ ಸಂರಕ್ಷಣೆ ಹಾಗೂ ಪರಿಸರ ಕುರಿತು ಜಾಗೃತಿ, ಸಹಯೋಗ ಹಾಗೂ ಸುಸ್ಥಿರ ಸಾಮೂಹಿಕ ಧ್ಯೇಯವನ್ನು ಮುನ್ನಡೆಸುವ ನಿಟ್ಟಿನಲ್ಲಿ ಈ ಸಮ್ಮೇಳನವು ಒಂದು ಪ್ರಮುಖ ಹೆಜ್ಜೆಯಾಗಿದೆ

<><*<><>*><>

ವಿಶ್ವಾವಸು ಸಂವತ್ಸರದ ಯುಗಾದಿ ಹಬ್ಬಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಶುಭಾಶಯ ಕೋರಿದ್ದಾರೆ.  ಚೈತ್ರಶುಕ್ಲ ಯುಗಾದಿ, ಗುಡಿಪಾಡ್ವಾ, ಚೇತಿ ಚಂದ್, ನವರೆಹ್ ಮತ್ತು ಸಾಜಿಬು ಚೈರೋಬಾ ಹಬ್ಬಕ್ಕೆ ರಾಷ್ಟ್ರದ ಜನರಿಗೆ ಅವರು ಶುಭ ಕೋರಿದ್ದಾರೆ. ವಸಂತ ಋತುವಿನ ಆರಂಭದಲ್ಲಿ ಆಚರಿಸಲಾಗುವ ಈ ಹಬ್ಬಗಳು ಭಾರತೀಯ ಹೊಸ ವರ್ಷದ ಆರಂಭವನ್ನು ಸಂಕೇತಿಸುತ್ತದೆ. ಈ ಹಬ್ಬಗಳು ಭಾರತದ ಸಾಂಸ್ಕೃತಿಕ ವೈವಿಧ್ಯತೆಯನ್ನು ಪ್ರದರ್ಶಿಸುತ್ತವೆ ಮತ್ತು ಸಾಮಾಜಿಕ ಒಗ್ಗಟ್ಟನ್ನು ಉತ್ತೇಜಿಸುತ್ತವೆ. ಈ ಹಬ್ಬಗಳ ಸಮಯದಲ್ಲಿ ಜನರು ಹೊಸ ಸುಗ್ಗಿಯ ಆನಂದವನ್ನು ಅನುಭವಿಸುತ್ತಾರೆ ಮತ್ತು ಪ್ರಕೃತಿಗೆ ತಮ್ಮ ಕೃತಜ್ಞತೆಯನ್ನು ವ್ಯಕ್ತಪಡಿಸುತ್ತಾರೆ ಎಂದು ತಮ್ಮ ಸಂದೇಶದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ಸಾಮರಸ್ಯ ಮತ್ತು ಏಕತೆಯ ಮನೋಭಾವನ್ನು ಬಲಪಡಿಸಲು ಹಾಗೂ ರಾಷ್ಟ್ರವನ್ನು ಹೊಸ ಎತ್ತರಕ್ಕೆ ಕೊಂಡಯ್ಯಲು ನವೀಕೃತ ಶಕ್ತಿಯೊಂದಿಗೆ ಕೆಲಸ ಮಾಡುವಂತೆ ಜನರಿಗೆ ಅವರು ಮನವಿ ಮಾಡಿದ್ದಾರೆ.

<><*<><>*><>

ಆಕಾಶವಾಣಿಯ ಜನಪ್ರಿಯ ಮಾಸಿಕ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ನಾಳೆ ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೨೦ನೇ ಆವೃತ್ತಿಯಾಗಿದೆ.  ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್

ಮೊಬೈಲ್ ಆಪ್‌ನಲ್ಲಿ ಪ್ರಸಾರವಾಗಲಿದೆ. ಅಲ್ಲದೇ, ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿ ನೇರ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಬಿತ್ತರವಾಗಲಿದೆ.

**<><*<><>*><>**

ಪ್ರಧಾನಿ ನರೇಂದ್ರ ಮೋದಿ ನಾಳೆ ಮಹಾರಾಷ್ಟ್ರ ಮತ್ತು ಛತ್ತೀಸ್‌ಗಢ ಪ್ರವಾಸ ಕೈಗೊಳ್ಳಲಿದ್ದಾರೆ. ಮೊದಲು ನಾಗ್ಪುರಕ್ಕೆ ಪ್ರಯಾಣಿಸಲಿರುವ ಪ್ರಧಾನಿ, ಬೆಳಗ್ಗೆ, ಸ್ಮೃತಿ ಮಂದಿರ, ಅನಂತರ ದೀಕ್ಷಾಭೂಮಿಗೆ ಭೇಟಿ ನೀಡಲಿದ್ದಾರೆ. ಮಾಧವ ನೇತ್ರಾಲಯ ಕೇಂದ್ರಕ್ಕೆ ಶಿಲಾನ್ಯಾಸ ನೆರವೇರಿಸಲಿರುವ ಅವರು, ಬಳಿಕ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ನಾಗ್ಪುರದಲ್ಲಿರುವ ಸೋಲಾರ್ ಡಿಫೆನ್ಸ್ ಮತ್ತು ಏರೋಸ್ಪೇಸ್ ಲಿಮಿಟೆಡ್‌ನಲ್ಲಿ ಲಾಯ್ಟರಿಂಗ್ ಮದ್ದುಗುಂಡು ಪರೀಕ್ಷಾ ಶ್ರೇಣಿ ಮತ್ತು ರನ್‌ವೇ ಸೌಲಭ್ಯವನ್ನು ಉದ್ಘಾಟಿಸಲಿದ್ದಾರೆ. ಪ್ರವಾಸದ ಎರಡನೇ ಚರಣದಲ್ಲಿ ಪ್ರಧಾನಿ ನೇಂದ್ರ ಮೋದಿ, ಛತ್ತೀಸ್‌ಗಢಕ್ಕೆ ಭೇಟಿ ನೀಡಲಿದ್ದು, ಬಿಲಾಸ್‌ಪುರದಲ್ಲಿ ೩೩ ಸಾವಿರದ ೭೦೦ ಕೋಟಿ ರೂಪಾಯಿಗೂ ಹೆಚ್ಚು ಮೌಲ್ಯದ ವಿದ್ಯುತ್, ತೈಲ ಮತ್ತು ಅನಿಲ, ರೈಲು, ರಸ್ತೆ, ಶಿಕ್ಷಣ ಮತ್ತು ವಸತಿ ಕ್ಷೇತ್ರಗಳಿಗೆ ಸಂಬಂಧಿಸಿದ ಬಹು ಅಭಿವೃದ್ಧಿ ಯೋಜನೆಗಳ ಶಂಕುಸ್ಥಾಪನೆ, ಹಾಗೂ ಲೋಕಾರ್ಪಣೆ ಮಾಡಲಿದ್ದಾರೆ.. ಬಿಲಾಸ್ಪುರ ಜಿಲ್ಲೆಯಲ್ಲಿ ೯ ಸಾವಿರದ ೭೯೦ ಕೋಟಿಗೂ ಹೆಚ್ಚು ಮೌಲ್ಯದ ಎನ್‌ಟಿಪಿಸಿಯ ಸೂಪರ್ ಥರ್ಮಲ್ ಪವರ್ ಪ್ರಾಜೆಕ್ಟ್ ಹಂತ-೩ ರ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಛತ್ತೀಸ್‌ಗಢದ ಕೊರಿಯಾ, ಸೂರಜ್‌ಪುರ, ಬಲರಾಂಪುರ ಮತ್ತು ಸುರ್ಗುಜಾ ಜಿಲ್ಲೆಗಳಲ್ಲಿ ಭಾರತ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್ ಬಿಪಿಸಿಎಲ್‌ನ ನಗರ ಅನಿಲ ವಿತರಣಾ ಯೋಜನೆಗೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಈ ಪ್ರದೇಶದಲ್ಲಿ ಸಂಪರ್ಕ ಸುಧಾರಿಸಲು, ೨ ಸಾವಿರದ ೬೯೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಒಟ್ಟು ೧೦೮ ಕಿಲೋಮೀಟರ್ ಉದ್ದದ ಏಳು ರೈಲ್ವೆ ಯೋಜನೆಗಳಿಗೆ ಪ್ರಧಾನಿ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಒಟ್ಟು ೧೧೧ ಕಿಲೋಮೀಟರ್ ಉದ್ದದ ಮೂರು ರೈಲ್ವೆ ಯೋಜನೆಗಳನ್ನು ರಾಷ್ಟ್ರಕ್ಕೆ ಸಮರ್ಪಿಸಲಿದ್ದಾರೆ. ರಾಜ್ಯದ ೨೯ ಜಿಲ್ಲೆಗಳಲ್ಲಿ ೧೩೦ ಪಿಎಂ-ಶ್ರೀ ಶಾಲೆಗಳು ಮತ್ತು ರಾಯ್‌ಪುರದಲ್ಲಿ ವಿದ್ಯಾ ಸಮಿಕ್ಷಾ ಕೇಂದ್ರಯನ್ನು ಲೋಕಾರ್ಪಣೆಗೊಳಿಸಲಿದ್ದಾರೆ. ಪಿಎಂ-ಶ್ರೀ ಯೋಜನೆಯಡಿಯಲ್ಲಿ ೧೩೦ ಶಾಲೆಗಳನ್ನು ಮೇಲ್ದರ್ಜೆಗೇರಿಸಲಾಗುತ್ತಿದೆ. ಇದರ ಜೊತೆಗೆ, ಪ್ರಧಾನಮಂತ್ರಿ ಆವಾಸ್ ಯೋಜನೆ - ಗ್ರಾಮೀಣ ಅಡಿಯಲ್ಲಿ ೩ ಲಕ್ಷ ಫಲಾನುಭವಿಗಳ ಗೃಹ ಪ್ರವೇಶ ನಡೆಯಲಿದ್ದು, ಈ ಯೋಜನೆಯಡಿಯಲ್ಲಿ ಕೆಲವು ಫಲಾನುಭವಿಗಳಿಗೆ ಪ್ರಧಾನಿ ನರೇಂದ್ರ ಮೋದಿ ಅವರು ಮನೆ ಕೀಲಿಗಳನ್ನು ಹಸ್ತಾಂತರಿಸಲಿದ್ದಾರೆ.

**<><*<><>*><>**

ಛತ್ತೀಸ್‌ಗಢದ ಸುಕ್ಮಾ ಜಿಲ್ಲೆಯ ಬಸ್ತರ್ ವಿಭಾಗದಲ್ಲಿ ಭದ್ರತಾಪಡೆಗಳು ಇಂದು ನಡೆಸಿದ ಕಾರ್ಯಾಚರಣೆಯಲ್ಲಿ ೧೧ ಮಹಿಳಾ ಮಾವೋವಾದಿಗಳು ಸೇರಿದಂತೆ ಒಟ್ಟು ೧೭ ಮಾವೋವಾದಿಗಳು ಹತರಾಗಿದ್ದಾರೆ. ಗುಂಡಿನ ಚಕಮಕಿಯಲ್ಲಿ ನಾಲ್ವರು ಭದ್ರತಾ ಸಿಬ್ಬಂದಿ ಗಾಯಗೊಂಡಿದ್ದಾರೆ. ಇಂದಿನ ಕಾರ್ಯಾಚರಣೆಯಲ್ಲಿ ಹತರಾದ ನಕ್ಸಲರ ಪೈಕಿ ಜಗದೀಶ್ ಅಲಿಯಾಸ್ ಬುಧ್ರಾ ಮೃತಪಟ್ಟಿದ್ದು, ಈತನ ಬಗ್ಗೆ ಸುಳಿವು ನೀಡಿದವರೆಗೆ ೨೫ ಲಕ್ಷ ರೂಪಾಯಿ ಬಹುಮಾನ ಘೋಷಿಸಲಾಗಿತ್ತು. ಸುಕ್ಮಾ ಜಿಲ್ಲೆಯ ಬಸ್ತರ್ ವಿಭಾಗದ ಕೆರ್ಲಾಪಾಲ್ ಪ್ರದೇಶದಲ್ಲಿ ಮಾವೋವಾದಿಗಳು ಅಡಿಗಿಕೊಂಡಿರುವ ಬಗ್ಗೆ ಖಚಿತ ಗುಪ್ತಚರ ಮಾಹಿತಿ ಮೇರಿಗೆ ಕೇಂದ್ರೀಯ ಮೀಸಲು ಪೊಲೀಸ್ ಪಡೆ-ಸಿಆರ್‌ಪಿಎಫ್ ಮತ್ತು ಜಿಲ್ಲಾ ಮೀಸಲು ಪಡೆ ಜಂಟಿ ಕಾರ್ಯಾಚರಣೆ ನಡೆಸಿದವು. ಕಾರ್ಯಾಚರಣೆ

ಸ್ಥಳದಿಂದ ಮಾವೋವಾದಿಗಳ ಮೃತದೇಹಗಳನ್ನು ಭದ್ರತಾ ಪಡೆಗಳು ವಶಪಡಿಸಿಕೊಂಡಿವೆ. ಅಲ್ಲದೇ, ಎಕೆ-೪೭, ಎಸ್‌ಎಲ್‌ಆರ್, ರಾಕೆಟ್ ಲಾಂಚರ್, ೩೦೩ - ರೈಫಲ್, ಬ್ಯಾರೆಲ್ ಗ್ರೆನೆಡ್ ಸೇರಿದಂತೆ ಅಪಾರ ಪ್ರಮಾಣದ ಮದ್ದು-ಗುಂಡುಗಳನ್ನು ಭದ್ರತಾಪಡೆಗಳು ವಶಪಡಿಸಿಕೊಂಡಿವೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

**<><*<><>*><>**

ಛತ್ತೀಸ್‌ಗಢದ ಸುಕ್ಮಾ ಜಿಲ್ಲೆಯಲ್ಲಿ ನಡೆದ ಕಾರ್ಯಾಚರಣೆಯಲ್ಲಿ, ೧೭ ನಕ್ಸಲರನ್ನು ಹೊಡೆದುರುಳಿಸಿದ ಭದ್ರತಾ ಪಡೆಗಳನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಅಭಿನಂದಿಸಿದ್ದಾರೆ. ಸಾಮಾಜಿಕ ಜಾಲತಾಣದ ಪೋಸ್ಟ್‌ನಲ್ಲಿ ಅವರು, ನಕ್ಸಲ್ ವಾದದ ವಿರುದ್ಧದ ಮತ್ತೊಂದು ಕಾರ್ಯಾಚರಣೆಯಲ್ಲಿ ಬೃಹತ್ ಪ್ರಮಾಣದ ಸ್ವಯಂ ಚಾಲಿತ ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಳ್ಳಲಾಗಿದೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರವು ೨೦೨೬ರ ಮಾರ್ಚ್ ೩೧ರ ಮೊದಲ ದೇಶದಲ್ಲಿ ಮಾವೋವಾದವನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ದೃಢ ನಿಶ್ಚಯ ಹೊಂದಿದೆ ಎಂದು ಹೇಳಿದ್ದಾರೆ. ಶಸ್ತ್ರಾಸ್ತ್ರಗಳು ಮತ್ತು ಹಿಂಸಾಚಾರದಿಂದ ಬದಲಾವಣೆ ತರಲು ಸಾಧ್ಯವಿಲ್ಲ. ಶಾಂತಿ ಮತ್ತು ಅಭಿವೃದ್ಧಿಯಿಂದ ಮಾತ್ರ ಬದಲಾವಣೆ ಸಾಧ್ಯ. ಹೀಗಾಗಿ ಶಸ್ತ್ರಾಸ್ತ್ರ ತ್ಯಜಿಸುವಂತೆ ಮಾವೋವಾದಿಗಳಿಗೆ ಸಚಿವ ಅಮಿತ್ ಶಾ ಮನವಿ ಮಾಡಿದ್ದಾರೆ.

**<><*<><>*><>**

ಗುಜರಾತ್‌ನ ಅಹಮದಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಇಂಡಿಯನ್ ಪ್ರೀಮಿಯರ್ ಲೀಗ್- ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಗುಜರಾತ್ ಟೈಟಾನ್ಸ್ ಮತ್ತು ಮುಂಬೈ ಇಂಡಿಯನ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಮುಂಬೈ ಇಂಡಿಯನ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><*<>**

**<>*><> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <><*<>**